ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194.

## ವಾರ್ಡ್ ಕಛೇರಿಯಲ್ಲಿ ದಿನಾಂಕ: 05-03-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು |
| --- |
| ೧. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>೨. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.೧೯೪, ಗೊಟ್ಟಿಗೆರೆ.<br>೩. ಸಹಾಯಕ ಕಾರ್ಯಮಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>೪. ಸಹಾಯಕ ಕಾರ್ಯಮಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>೫. ಆರೋಗ್ಯಾಧಿಕಾರಿಗಳು, ಗೊಟ್ಟಿಗೆರೆ.<br>೬. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ೧೯೪, ಗೊಟ್ಟಿಗೆರೆ.<br>೭. ಅರಣ್ಯ ಸಂರಕ್ಷಣಾಧಿಕಾರಿ, ಗೊಟ್ಟಿಗೆರೆ.<br>೮. ತೋಟಗಾರಿಕೆ ಸಹಾಯಕರು, ಗೊಟ್ಟಿಗೆರೆ.<br>೯. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.೧೯೪, ಗೊಟ್ಟಿಗೆರೆ.<br>ಸ್ಥಳೀಯ ಸಂಘ ಸದಸ್ಯರು:-<br>೧. ಅಧ್ಯಕ್ಷರು, ರಾಯಲ್‌ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>೨. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್.<br>೩. ಅಧ್ಯಕ್ಷರು, ಹಿಮಗಿರಿ ಮೆಡೋಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>೪. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ |

ದಿನಾಂಕ: 05-03-2022ರಂದು ಮಧ್ಯಾಹ್ನ 03:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿಲಾಯಿತು.

**1.** ಕೋವಿಡ್-೧೯ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.

(I) ಕೋವಿಡ್ ಪ್ರಕರಣಗಳು ಕಡಿಮೆಯಾಗುತ್ತಿವೆ ಮತ್ತು ಕಳೆದ 3 ದಿನಗಳಿಂದ ಹೊಸ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಆರೋಗ್ಯಾಧಿಕಾರಿಗಳು ತಿಳಿಸಿದರು. ಕೋವಿಡ್ ಸೂಕ್ತ ನಡವಳಿಕೆಯನ್ನು ಅನುಸರಿಸುವುದನ್ನು ಮುಂದುವರಿಸಲು ನಾಗರಿಕರಲ್ಲಿ ಕೋರುತ್ತಾ ವ್ಯಾಕ್ಸಿನೇಷನ್ ಕೈಗೊಳ್ಳುವಲ್ಲಿ ಸಹಕಾರವನ್ನು ವಿಸ್ತರಿಸಿದ್ದಕ್ಕಾಗಿ ಸ್ವಯಂ ಸೇವಕರು ಹಾಗೂ ಅರ್.ಡಬ್ಲ್ಯೂ.ಎ ರವರಿಗೆ ಧನ್ಯವಾದವನ್ನು ಸಲ್ಲಿಸಲಾಯಿತು.

(II) ಲಸಿಕಾ ಕಾರ್ಯಕ್ರಮವನ್ನು ವಾರ್ಡ್ ನ ಎಲ್ಲಾ ಸ್ಥಳಗಳಲ್ಲಿ ನಿವಾಸಿಗಳ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ನಡೆಸಲಾಗುತ್ತಿದೆ. ತಮ್ಮ ಬಡಾವಣೆ/ಅಪಾರ್ಟಮೆಂಟ್ ಗಳಲ್ಲಿ ಲಸಿಕಾ ಶಿಬಿರ ನಡೆಸಲು ಆರೋಗ್ಯಾಧಿಕಾರಿಗಳನ್ನು ಸಂಪರ್ಕಿಸಲು ತಿಳಿಸಲಾಯಿತು.

Scanned by CamScanner

2. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

(I) ಕ್ಲಾಸಿಕ್ ಆರ್‌ಚಿಡ್ಸ್ ಲೊಯಲಾ ಗೇಟ್ ಬಳಿ ರಸ್ತೆ ಬದಿಯಲ್ಲಿ ತ್ಯಾಜ್ಯ ಇರುವುದನ್ನು ತೆರವುಗೊಳಿಸಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.

(II) ಸುರಭಿ ನಗರ ಸುತ್ತಮುತ್ತ ಪ್ರದೇಶಗಳಲ್ಲಿ ಘನತ್ಯಾಜ್ಯವನ್ನು ನಿಯತಕಾಲಿಕವಾಗಿ ತೆರವುಗೊಸುತ್ತಿರುವುದಾಗಿ ಆರೋಗ್ಯ ಪರಿವೀಕ್ಷಕರು ತಿಳಿಸಿದರು.

(III) ಗೊಟ್ಟಿಗೆರೆ – ಕೆಂಬತ್ತಹಳ್ಳಿ ರಸ್ತೆ ಬದಿಯ ಪಾದಾಚಾರಿ ಮಾರ್ಗದಲ್ಲಿ ಸಂಗ್ರಹಣೆಯಾಗಿರುವ ತ್ಯಾಜ್ಯವಿದ್ದು ಕೂಡಲೇ ತೆರವುಗೊಳಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಭೂಗತ ಕೇಬಲ್ ಕಾಮಗಾರಿಯಿಂದಾಗಿ ವಾರ್ಡ್‌ನಾದ್ಯಂತ ರಸ್ತೆಗಳಲ್ಲಿ ತೆರೆದ ಕಂದಕಗಳು ಉಂಟಾಗಿವೆ. ಅವುಗಳನ್ನು ಸರಿಪಡಿಸಲು ಬೆಸ್ಕಾಂ ಅಭಿಯಂತರರು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಯಿತು. ತಮ್ಮ ಕುಂದುಕೊರತೆಗಳ ಬಗ್ಗೆ ಸ್ಥಳ ಹಾಗೂ ಫೋಟೋಗಳನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಕಳುಹಿಸಲು ಅರ್.ಡಬ್ಲ್ಯೂ.ಎ ಗಳಿಗೆ ತಿಳಿಸಲಾಯಿತು.

(II) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿ ಟ್ರಾನ್ಸ್‌ಫಾರ್ಮರ್ ದುರಸ್ಥಿ ಕಾರ್ಯವನ್ನು ಕೂಡಲೆ ಪೂರ್ಣಗೊಳಿಸಲು ಅಧ್ಯಕ್ಷರು ಹಿಮಗಿರಿ ಮೆಡೋಸ್ ಕೋರಿದ್ದು ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

(III) ಬನ್ನೇರಘಟ್ಟ ಮುಖ್ಯ ರಸ್ತೆಯಲ್ಲಿ ಬೀದಿ ದೀಪದ ಕೇಬಲಿಂಗ್ ಪ್ರಗತಿಯಲ್ಲಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಸೌತ್ ಅವೆನ್ಯು ಬಡಾವಣೆಯ ಮಿಸ್ಸಿಂಗ್ ಲಿಂಕ್ಸ್ ಕಾರ್ಯವನ್ನು ಕೈಗೊಳ್ಳುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ವಾರ್ಡ್ ಅಭಿಯಂತರರೊಂದಿಗೆ ಕೂಡಲೇ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

(II) ಐ.ಡಿ.ಬಿ.ಐ ಬಡಾವಣೆ ಗೆ ನೀರಿನ ಸಂಪರ್ಕ ಕಲ್ಪಿಸಲು ಕೋರಿರುವ ಬಗ್ಗೆ ಅಗತ್ಯ ಕ್ರಮವಹಿಸುವುದು.

(III) ಸುಬ್ಬರಾಯನಕೆರೆ ಕಾಮಗಾರಿಯು ಪ್ರಗತಿಯಲ್ಲಿದ್ದು ಪಾಲಿಕೆಯ ಕೆರೆಗಳ ಇಲಾಖೆಯೊಂದಿಗೆ ಸಮನ್ವಯದಿಂದ ಯುಜಿಡಿ ವ್ಯವಸ್ಥೆಯನ್ನು ದುರಸ್ತಿ ಮಾಡುವಂತೆ ಸಹಾಯಕ ಕಾರ್ಯಮಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

Scanned by CamScanner

5. ರಾಯಲ್ ಕೌಂಟಿ ಬಡಾವಣೆಯಲ್ಲಿ ವಾರ್ಡ್ ಕಛೇರಿ ಎದುರು ಇರುವ ಖಾಲಿ ನಿವೇಶನದ ದೂರಿಗೆ ಸಂಬಂಧಪಟ್ಟಂತೆ ಪರಿವರ್ತನ ಸಂಘದವರು ದಾಖಲಾತಿಗಳನ್ನು ಕಂದಾಯ ಇಲಾಖೆಗೆ ಸಲ್ಲಿಸಿರುವುದಾಗಿ ತಿಳಿಸಿದರು. ಕಂದಾಯ ನಿರೀಕ್ಷಕರು ಹಾಗೂ ವಾರ್ಡ್ ಅಭಿಯಂತರರು ದಾಖಲಾತಿಗಳನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸಲು ಸೂಚಿಸಲಾಯಿತು.

6. ರಸ್ತೆ ಬದಿ ಹಾಗೂ ಮೀಡಿಯನ ನಲ್ಲಿ ನೆಟ್ಟಿರುವ ಗಿಡಗಳಿಗೆ ನಿಯತಕಾಲಿಕವಾಗಿ ನೀರು ಹಾಕುವ ಕಾರ್ಯವನ್ನು ಕೈಗೊಳ್ಳುತ್ತಿರುವುದಾಗಿ ಅರಣ್ಯಾಧಿಕಾರಿಗಳು ತಿಳಿಸಿದರು.

7. ಐ.ಡಿ.ಬಿ.ಐ ಬಡವಣೆಯ ಕ್ರಾಸ್ ರೋಡ್ ನಲ್ಲಿರುವ ಗೋಡೌನ್ ನಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ದೂರಿನ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

8. ಐ.ಡಿ.ಬಿ.ಐ ಬಡಾವಣೆಗೆ ಹೋಗುವ ರಸ್ತೆಯ ಬದಿ ಚರಂಡಿಯ cover slab ದುರಸ್ಥಿಗೊಂಡಿರುವ ಕಾರಣ ಅಪಘಾತಗಳು ಸಂಭವಿಸುತ್ತಿರುವ ಬಗ್ಗೆ ಐ.ಡಿ.ಬಿ.ಐ ಬಡಾವಣೆ ನಿವಾಸಿಗಳು ತಿಳಿಸಿದರು. ಈ ಸಂಬಂಧ ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: ೧೯೪, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.

Scanned by CamScanner

9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕಕಲ್ಯಾಣ ಸಂಸ್ಥೆಗಳು.

Scanned by CamScanner